# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 04 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13-09-2021 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಹಲವಾರು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸರ್ಕಾರಿ ವೈದ್ಯರು ವಾರದಲ್ಲಿ 1-2 ದಿನ ಮಾತ್ರ ಭೇಟಿ ನೀಡಿ ಉಳಿದ ದಿನಗಳಲ್ಲಿ ಸ್ವಂತ ಕ್ಲಿನಿಕ್ ಗಳನ್ನು ತೆರೆದು ಸೇವೆ ಸಲ್ಲಿಸುತ್ತಿದ್ದು ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ |
| ಆ | ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಹಳ್ಳಿಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ; ಅದರಲ್ಲಿ ಎಷ್ಟು ಆಸ್ಪತ್ರೆಗಳಲ್ಲಿ ವೈದ್ಯರು ನೇಮಕವಾಗಿದ್ದಾರೆ; | ಬೆಳಗಾವಿ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ:146<br>129 ಪ್ರಾ.ಆ.ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳು ಭರ್ತಿಯಾಗಿದ್ದು, ಕಾರ್ಯನಿರ್ವಹಿಸುತ್ತಿದ್ದಾರೆ.<br>17 ಪ್ರಾ.ಆ.ಕೇಂದ್ರಗಳಲ್ಲಿ ವೈದ್ಯಾಧಿಕಾರಿ ಹುದ್ದೆ ಖಾಲಿಯಿದ್ದು, ಈ ಹುದ್ದೆಗಳ ಎದುರು 10 ಎಂಬಿಬಿಎಸ್ ಗುತ್ತಿಗೆ ವೈದ್ಯರು ಹಾಗೂ 07 ಆಯುಷ್ ಗುತ್ತಿಗೆ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. |
| ಇ | ವೈದ್ಯರನ್ನು ನೇಮಕ ಮಾಡದಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ಹಾಗೂ ನೇಮಕಾತಿ ಮಾಡದಿರಲು ಕಾರಣವೇನು; | ವೈದ್ಯಾಧಿಕಾರಿ ಹುದ್ದೆ ಖಾಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ : 17<br><br>ಮೇ 2021 ರಲ್ಲಿ ವಿಶೇಷ ನೇರ ನೇಮಕಾತಿ ಸಮಿತಿ ಮೂಲಕ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಬೆಳಗಾವಿಯಲ್ಲಿ ಖಾಲಿ ಇದ್ದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 83 ವೈದ್ಯರನ್ನು ನೇಮಕ ಮಾಡಲಾಗಿತ್ತು. 66 ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದು, 17 ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದ ಕಾರಣ ಸದರಿ 17 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇರುತ್ತವೆ.<br><br>ಖಾಲಿ ಇರುವ ಈ 17 ಹುದ್ದೆಗಳಲ್ಲಿ ಗುತ್ತಿಗೆ ಎಂಬಿಬಿಎಸ್ ಮತ್ತು ಗುತ್ತಿಗೆ ಆಯುಷ್ ವೈದ್ಯರು |

| | | |
|---|---|---|
| | | ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಹೆಚ್ಚುವರಿ ಪಟ್ಟಿ ಮೂಲಕ 108 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. |
| ಈ | ಸ್ವಂತ ಕ್ಲಿನಿಕ್‌ಗಳನ್ನು ತೆರೆದುಕೊಂಡು ನಗರದಲ್ಲಿರುವ ಸರ್ಕಾರಿ ವೈದ್ಯರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮ ಏನು; | ಉದ್ಭವಿಸುವುದಿಲ್ಲ |
| ಉ | ವೈದ್ಯರು ಹಳ್ಳಿಗಳಿಗೆ ಹೋಗಿ ಸರ್ಕಾರಿ ಆಸ್ಪತ್ರೆಯಲ್ಲಿ ಕೆಲಸ ಮಾಡುವಂತಾಗಲು ಸರ್ಕಾರ ಕೈಗೊಂಡ ಕ್ರಮವೇನು? | 1.ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ ಹೊಸದಾಗಿ ನೇಮಕಕೊಂಡ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು (ಎಂಬಿಬಿಎಸ್) ಆರು ವರ್ಷಗಳ ಕಡ್ಡಾಯ ಗ್ರಾಮೀಣ ಸೇವೆಗೆ ನೇಮಿಸಲಾಗಿದೆ.<br><br>2.ಎಂಬಿಬಿಎಸ್ ಪದವಿ ಪೂರೈಸಿದ ವೈದ್ಯ ಅಭ್ಯರ್ಥಿಗಳನ್ನು ಒಂದು ವರ್ಷದ ಕಡ್ಡಾಯ ಸರ್ಕಾರಿ ಸೇವೆಗೆ ನಿಯೋಜಿಸಲಾಗಿದೆ. |

**ಆಕುಕ 40 ಹೆಚ್‌ಎಸ್‌ಡಿ 2021**

(ಡಾ॥ ಕೆ ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು